371

## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 132(1420)
2. ಸದಸ್ಯರ ಹೆಸರು : ಶ್ರೀ ಶಾಂತರಾಮ್ ಬುಡ್ನ ಸಿದ್ಧಿ(ನಾಮನಿರ್ದೇಶನ ಹೊಂದಿದವರು)
3. ಉತ್ತರಿಸುವ ದಿನಾಂಕ : 22/08/2025
4. ಉತ್ತರಿಸುವ ಸಚಿವರು : ಸನ್ಮಾನ್ಯ ಮುಖ್ಯಮಂತ್ರಿಯವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅರಣ್ಯ ಹಕ್ಕು ಕಾಯ್ದೆಯಡಿಯಲ್ಲಿ ಬುಡಕಟ್ಟು ಜನಾಂಗದ ಅನೇಕರಿಗೆ ಹಕ್ಕುಪತ್ರ ನೀಡುವ ಪ್ರಕ್ರಿಯೆ ಸಮರ್ಪಕವಾಗಿ ಆಗದೆ ಅರಣ್ಯ ಹಕ್ಕು ಸಮಿತಿಯಲ್ಲಿ 1 ಎಕರೆ ಸಾಗುವಳಿ ಮಾಡುವವರು ದಾಖಲೆ ಕೊಟ್ಟಿರುವವರಿಗೆ ಕೆಲವೇ ಗುಂಟೆಗಳಿಗೆ ಮಾತ್ರ ಹಕ್ಕುಪತ್ರ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ➢ ಅರಣ್ಯ ಹಕ್ಕು ಕಾಯ್ದೆ 2006ರಡಿ ಅರ್ಜಿ ಸಲ್ಲಿಸಿದವರು ಅನುಭೋಗದಲ್ಲಿರುವ ಭೂಮಿಗಿಂತ ಕಡಿಮೆ ಭೂಮಿ ಮಂಜೂರು ಮಾಡಿರುವ ಕುರಿತು ಯಾವುದೇ ಆಕ್ಷೇಪಣೆಗಳು ಜಿಲ್ಲಾ ಮಟ್ಟದ ಸಮಿತಿಗೆ ಸ್ವೀಕೃತಗೊಂಡಿರುವುದಿಲ್ಲ. ಅರ್ಜಿ ಸಲ್ಲಿಸಿರುವ ಭೂಮಿಗಿಂತ ಕಡಿಮೆ ಭೂಮಿ ಮಂಜೂರು ಮಾಡಿರುವ ಬಗ್ಗೆ ಆಕ್ಷೇಪಣೆ ಇದ್ದಲ್ಲಿ ಅರಣ್ಯ ಹಕ್ಕು ಕಾಯ್ದೆಯ ನಿಯಮ 6(6) ಪ್ರಕಾರ, ಅರಣ್ಯ ಹಕ್ಕಿನ ದಾಖಲೆಯ ಮೇಲಿನ ಜಿಲ್ಲಾ ಮಟ್ಟದ ಸಮಿತಿಯ ನಿರ್ಣಯವು ಅಂತಿಮವಾಗಿರುತ್ತದೆ.<br>➢ ಆದುದರಿಂದ, ಅರ್ಜಿದಾರರು ದೂರು ಅಥವಾ ಕುಂದು ಕೊರತೆಗಳಿದ್ದಲ್ಲಿ ಜಿಲ್ಲಾ ಅರಣ್ಯ ಹಕ್ಕು ಸಮಿತಿಗೆ ಸದಸ್ಯ ಕಾರ್ಯದರ್ಶಿ ಮೂಲಕ ಮನವಿ ಸಲ್ಲಿಸಬೇಕಾಗಿರುತ್ತದೆ. |
| ಆ) | ಉತ್ತರ ಕನ್ನಡ ಜಿಲ್ಲೆಯಲ್ಲಿ ಅರಣ್ಯ ಹಕ್ಕು ಕಾಯ್ದೆಯಡಿ ಬುಡಕಟ್ಟು ಜನಾಂಗದವರಿಂದ ಸ್ವೀಕೃತವಾಗಿರುವ ಅರ್ಜಿಗಳು ಹಕ್ಕುಪತ್ರ ನೀಡಿರುವ ಕುಟುಂಬಗಳು ಮತ್ತು ತಿರಸ್ಕೃತ ಗೊಂಡಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು) | ➢ ಉತ್ತರ ಕನ್ನಡ ಜಿಲ್ಲೆಯಲ್ಲಿ ಅರಣ್ಯ ಹಕ್ಕು ಕಾಯ್ದೆಯಡಿ ಪರಿಶಿಷ್ಟ ಪಂಗಡದವರಿಂದ ಒಟ್ಟು 4,335 ಅರ್ಜಿಗಳನ್ನು ಸ್ವೀಕರಿಸಲಾಗಿದ್ದು, ಸದರಿ ಅರ್ಜಿಗಳಲ್ಲಿ 1,356 ಅರ್ಜಿದಾರರಿಗೆ ಮಾನ್ಯ ಮಾಡಿ ಹಕ್ಕು ಪತ್ರ ನೀಡಲಾಗಿದ್ದು, 2,979 ಅರ್ಜಿಗಳು ತಿರಸ್ಕೃತಗೊಂಡಿರುತ್ತವೆ(ವಿವರವನ್ನು ಅನುಬಂಧ-1 ರಲ್ಲಿ ನೀಡಿದೆ). |

| | | |
|---|---|---|
| ಇ) | ಸದರಿ ಜಿಲ್ಲೆಯಲ್ಲಿ ಅನೇಕರಿಗೆ ಅರಣ್ಯ ಹಕ್ಕು ಕಾಯ್ದೆಯಡಿ ಗ್ರಾಮ ಅರಣ್ಯ ಹಕ್ಕು ಸಮಿತಿ ಮಟ್ಟದಲ್ಲಿ GPS ಮಾಡಿ ಅಂತಿಮಗೊಳಿಸಿದಷ್ಟು ಭೂಮಿಗೆ ಹಕ್ಕುಪತ್ರ ನೀಡದೆ ಕಡಿಮೆ ಗುಂಟೆಗಳಲ್ಲಿ ಮಾತ್ರ ಹಕ್ಕು ಭೂಮಿಗೆ ನೀಡಲು ಸೂಕ್ತ ಕಾರಣಗಳೇನು;ಇದನ್ನು ಸರಿಪಡಿಸಲು ಇರುವ ಮಾನದಂಡಗಳು ಮತ್ತು ಸರ್ಕಾರದ ಮುಂದಿನ ಕ್ರಮಗಳೇನು? (ಮಾಹಿತಿ ಒದಗಿಸುವುದು) | ➢ ಅರಣ್ಯ ಹಕ್ಕು ಕಾಯ್ದೆ 2006ರಡಿ ಅರ್ಜಿ ಸಲ್ಲಿಸಿದವರು ಅನುಭೋಗದಲ್ಲಿರುವ ಭೂಮಿಗಿಂತ ಕಡಿಮೆ ಭೂಮಿ ಮಂಜೂರು ಮಾಡಿರುವ ಕುರಿತು ಯಾವುದೇ ಆಕ್ಷೇಪಣೆಗಳು ಜಿಲ್ಲಾ ಮಟ್ಟದ ಸಮಿತಿಗೆ ಸ್ವೀಕೃತಗೊಂಡಿರುವುದಿಲ್ಲ.<br><br>➢ ಗ್ರಾಮ ಅರಣ್ಯ ಹಕ್ಕು ಸಮಿತಿಯು ಅರ್ಜಿದಾರರ ಅನುಭೋಗದ ಜಮೀನು/ ನಿವೇಶನದ GPS/ಜಂಟಿ ಸರ್ವೆ ನಕ್ಷೆಯನ್ನು ತಯಾರಿಸಿ ಶಿಫಾರಸ್ಸು ಮಾಡಿದ ಜಮೀನು/ನಿವೇಶನಕ್ಕಿಂತ ಕಡಿಮೆ ಮಂಜೂರು ಮಾಡಿದ್ದಲ್ಲಿ, ಹಕ್ಕು ಪತ್ರ ಪಡೆದವರು ಜಿಲ್ಲಾ ಮಟ್ಟದ ಅರಣ್ಯ ಹಕ್ಕು ಸಮಿತಿಗೆ ಆಕ್ಷೇಪಣೆಯನ್ನು ಸಲ್ಲಿಸಬಹುದು.<br><br>➢ ಅರಣ್ಯ ಹಕ್ಕು ಕಾಯ್ದೆ 2006ರ ಅನುಷ್ಠಾನ ಕುರಿತಂತೆ ರಾಜ್ಯ ಮಟ್ಟದ ಮೇಲ್ವಿಚಾರಣಾ ಸಮಿತಿಯಿಂದ ಜಿಲ್ಲಾ ಮಟ್ಟದ ಸಮಿತಿಗಳಿಗೆ ಕಾಲ ಕಾಲಕ್ಕೆ ಸ್ಪಷ್ಟೀಕರಣಗಳನ್ನು ನೀಡಲಾಗಿದೆ. |

**STW/SECA/TSP/38/2025**

(ಸಿದ್ದರಾಮಯ್ಯ)
**ಮುಖ್ಯಮಂತ್ರಿ**